ಶ್ರೀ ಬಿ.ಬಿ.ನಿಂಗಯ್ಯ (ಪಶುಸಂಗೋಪನಾ ರಾಜ್ಯ ಸಚಿವರು):

ಅ) **ಹುದ್ದೆಗಳು ಖಾಲಿ ಇರುವುದು**

ಪಶುವೈದ್ಯಾಧಿಕಾರಿಗಳು: 234

ಪಶುವೈದ್ಯಾ ಪರೀಕ್ಷಕರು: 270

ಪಶುವೈದ್ಯಾ ಸಹಾಯಕರು: 1258

ಆ) 1) ಪಶುವೈದ್ಯ ಅಧಿಕಾರಿಗಳ ಹುದ್ದೆಗಳನ್ನು ನೇರ ನೇಮಕಾತಿ ಮುಖಾಂತರ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳ ಆಯ್ಕೆಗಾಗಿ ಕರ್ನಾಟಕ ಲೋಕಸೇವಾ ಆಯೋಗವನ್ನು ಕೋರಿದ್ದು, ಅಭ್ಯರ್ಥಿಗಳ ಸಂದರ್ಶನದ ಕಾರ್ಯವು ನಡೆದಿದೆ.

2) ಪಶುವೈದ್ಯಕೀಯ ಪರೀಕ್ಷಕರ 50 ಹುದ್ದೆಗಳನ್ನು ಪಶುವೈದ್ಯಕೀಯ ಸಹಾಯಕರಿಗೆ ಮುಂಬಡ್ತಿ ನೀಡುವ ಮೂಲಕ ಹಾಗೂ 220 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ತುಂಬಲು ತರಬೇತಿ ಪಡೆದ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

3) ಪಶುವೈದ್ಯಕೀಯ ಸಹಾಯಕರ ಹುದ್ದೆಗಳನ್ನು ತರಬೇತಿ ಪಡೆದ ಅಭ್ಯರ್ಥಿಗಳಿಂದ ತುಂಬಬೇಕಾಗಿರುತ್ತದೆ. ತರಬೇತಿ ಪಡೆದ ಅಭ್ಯರ್ಥಿಗಳು ಲಭ್ಯವಾದ ಕೂಡಲೇ ಕ್ರಮ ತೆಗೆದುಕೊಳ್ಳಲಾಗುವುದು.

ವಿಷಯ: ಪುತ್ತೂರಿನ ಮ್ಯಾಜಿಸ್ಟ್ರೇಟ್ ನ್ಯಾಯಾಲಯವನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರಿಸುವುದು.

2763 (4069)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು): ಮಾನ್ಯ ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುತ್ತೂರಿನಲ್ಲಿ ಈಗಿರುವ ಮ್ಯಾಜಿಸ್ಟ್ರೇಟ್ ನ್ಯಾಯಾಲಯವನ್ನು ಹೊಸ ಕಟ್ಟಡಕ್ಕೆ ಸ್ಥಳಾಂತರಿಸುವ ಉದ್ದೇಶ ಸರ್ಕಾರಕ್ಕಿದೆಯೆ, ಇದ್ದರೆ ಯಾವಾಗ ಮಾಡಲಾಗುವುದು?

ಆ) ಪ್ರಸ್ತುತ ಇರುವ ವಕೀಲರ ಸಂಘದಲ್ಲಿ ಪೀಠೋಪಕರಣಗಳ ಹಾಗೂ ಲೈಬ್ರರಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ

ಸರ್ಕಾರ ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು?

ಶ್ರೀ ಯಂ.ಸಿ.ನಾಣಯ್ಯ (ಕಾನೂನು ಮತ್ತು ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು):

ಅ) ಪುತ್ತೂರಿನಲ್ಲಿನ ಎಲ್ಲಾ ನ್ಯಾಯಾಲಯಗಳು ನೂತನ ನ್ಯಾಯಾಲಯ ಕಟ್ಟಡದಲ್ಲಿರುತ್ತದೆ.

ಆ) ಗಮನಕ್ಕೆ ಬಂದಿದೆ. 1996-97ನೇ ಸಾಲಿನಿಂದ ತಾಲ್ಲೂಕಿನಲ್ಲಿರುವ ವಕೀಲರ ಸಂಘಗಳಿಗೆ ನೀಡುವ ವಾರ್ಷಿಕ ಅನುದಾನವನ್ನು ರೂ.4,500-00ರಿಂದ ರೂ.10,000-00ಕ್ಕೆ ಹೆಚ್ಚಿಸಿದೆ. ಈ ಅನುದಾನವನ್ನು ಇನ್ನೂ ಹೆಚ್ಚಿಸುವ ಬಗ್ಗೆ ಸರ್ಕಾರ ಪರಿಶೀಲಿಸುತ್ತಿದೆ.

ವಿಷಯ: ಪುತ್ತೂರು ತಾಲ್ಲೋಕಿನಲ್ಲಿನ ಜನತಾ ನ್ಯಾಯಾಲಯಗಳು.

2764 (4070)

ಶ್ರೀ ಡಿ.ವಿ.ಸದಾನಂದಗೌಡ (ಪುತ್ತೂರು): ಮಾನ್ಯ ಕಾನೂನು, ಸಂಸದೀಯ ವ್ಯವಹಾರಗಳು ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಪುತ್ತೂರು ತಾಲ್ಲೋಕಿನಲ್ಲಿ ಕಳೆದೆರಡು ವರ್ಷಗಳಲ್ಲಿ ಎಷ್ಟು ಜನತಾ ನ್ಯಾಯಾಲಯಗಳನ್ನು ನಡೆಸಲಾಗಿದೆ? ಇದರಲ್ಲಿ ಪರಿಹರಿಸಲ್ಪಟ್ಟ ಮೊಕದ್ದಮೆಗಳು ಎಷ್ಟು?

ಆ) ಪುತ್ತೂರು ಸಿವಿಲ್ ಜಡ್ಜ್ ನ್ಯಾಯಾಲಯಕ್ಕೆ ಹಸ್ತಾಂತರಿಸಲ್ಪಟ್ಟ ಮೋಟಾರು ವಾಹನ ಅಪಘಾತ ಪರಿಹಾರ ಮೊಕದ್ದಮೆಗಳ ಸಂಖ್ಯೆ ಎಷ್ಟು? ಈ ಬಗ್ಗೆ ಯಾವುದಾದರೂ ಜನತಾ ನ್ಯಾಯಾಲಯದ ಮೂಲಕ ಪರಿಹಾರ ಮಾಡಲಾಗಿದೆಯೆ? ಹಾಗಿಲ್ಲದ್ದಲ್ಲಿ ಕಾರಣವೇನು?

ಶ್ರೀ ಯಂ.ಸಿ.ನಾಣಯ್ಯ (ಕಾನೂನು ಸಂಸದೀಯ ವ್ಯಹಾರಗಳು, ಶಾಸನ ರಚನೆ, ವಾರ್ತಾ ಮತ್ತು ಪ್ರಚಾರ ಸಚಿವರು):

ಅ) ಕಳೆದ ಎರಡು ವರ್ಷಗಳಲ್ಲಿ ಎಂಟು ಜನತಾ ನ್ಯಾಯಾಲಯ ನಡೆಸಿ ನೂರ ಐವತ್ತೊಂದು ಪ್ರಕರಣಗಳನ್ನು ಇತ್ಯರ್ಥ ಪಡಿಸಲಾಗಿದೆ.

ಆ) 1543 ಮೋಟಾರು ವಾಹನ ಅಪಘಾತ ಪರಿಹಾರ ಪ್ರಕರಣಗಳು. 33